ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಆನೆಗಳ ಹಾವಳಿಗೆ ಸರ್ಕಾರ ಕೈಗೊಂಡ ಕ್ರಮ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

10 (122) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಲೆನಾಡು ಜಿಲ್ಲೆಗಳಲ್ಲಿ ಆನೆಗಳ ಹಾವಳಿ ಹೆಚ್ಚಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಆನೆಗಳ ಹಾವಳಿ ತಡೆಗಟ್ಟುವ ಕುರಿತು ಅಧಿಕಾರಿಗಳೊಂದಿಗೆ ಎಷ್ಟು ಬಾರಿ ಮಾನ್ಯ ಅರಣ್ಯ ಸಚಿವರು ಸ್ಥಳ ಪರಿಶೀಲಿಸಿದ್ದಾರೆ; ಯಾವ ಯಾವ ಭಾಗಗಳಿಗೆ ಮಾನ್ಯ ಸಚಿವರು ಭೇಟಿ ನೀಡಿದ್ದಾರೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಆನೆ ದಾಳಿಗೊಳಗಾದ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರವೆಷ್ಟು; ಈವರೆಗೂ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಕಾಡಿನಿಂದ ನಾಡಿಗೆ ಆನೆಗಳು ಬಾರದ ರೀತಿ ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ; ಎಲ್ಲೆಲ್ಲಿ ಕೈಗೊಳ್ಳಲಾಗಿದೆ ಹಾಗೂ ಇದಕ್ಕೆ ತಗುಲಿದ ವೆಚ್ಚ ಎಷ್ಟು; (ವಿವರ ಒದಗಿಸುವುದು)

(ಉ) ಪರಿಹಾರ ನೀಡದೆ ಬಾಕಿ ಉಳಿದಿರುವ ಕುಟುಂಬಗಳೆಷ್ಟು; ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಉಳಿದ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)